# ಸಾಹಿತಿಗಳ ಸಾಕ್ಷ್ಯಚಿತ್ರ ಪ್ರದರ್ಶಿಸಿ

ಬೆಂಗಳೂರು: ಸಾಹಿತಿಗಳ ಜೀವನವನ್ನು ಜನರಿಗೆ ಪರಿಚಯಿಸಲು ರಾಜ್ಯದ ಚಿತ್ರ ಮಂದಿರಗಳಲ್ಲಿ ಸಾಕ್ಷ್ಯ ಚಿತ್ರಗಳನ್ನು ಪ್ರದರ್ಶಿಸುವ ಯೋಜನೆಯನ್ನು ಸರ್ಕಾರವು ಪರಿಗಣಿಸಬೇಕು ಎಂದು ರಾಷ್ಟ್ರಪ್ರಶಸ್ತಿ ವಿಜೇತ ಚಿತ್ರ ನಿರ್ದೇಶಕ ಪಿ. ಶೇಷಾದ್ರಿ ಹೇಳಿದರು.

ಭಾರತೀಯ ಸಂಸ್ಕೃತಿ ಸಚಿವಾಲಯ ಹಾಗೂ ಭಾರತೀಯ ವಿದ್ಯಾಭವನದ ಆಶ್ರಯದಲ್ಲಿ ವಿದ್ಯಾಭವನದ ಕೆಆರ್‌ಜಿ ಸಭಾಂಗಣದಲ್ಲಿ ನಡೆಯುತ್ತಿರುವ ಸಾಹಿತ್ಯ ಚಿತ್ರೋತ್ಸವದಲ್ಲಿ ಶನಿವಾರ ಮಾತನಾಡಿದ ಅವರು, ಕೀರ್ತಿಶೇಷ ಸಾಹಿತಿಗಳ ಬದುಕನ್ನು ಮುಂದಿನ ಪೀಳಿಗೆಗಳಿಗೆ ತಿಳಿಸುವ ಪ್ರಯತ್ನ ಸಾಕ್ಷ್ಯಚಿತ್ರಗಳಿಂದಾಗಬೇಕು ಎಂದು ತಿಳಿಸಿದರು.

ಸಾಹಿತಿಗಳ ಜೀವನವನ್ನು ಜನರಿಗೆ ಪರಿಚಯಿಸಲು ಪ್ರತಿ ಚಿತ್ರಮಂದಿರಗಳಲ್ಲಿ ಸಾಕ್ಷ್ಯ ಚಿತ್ರಗಳನ್ನು ಪ್ರದರ್ಶಿಸುವ ಯೋಜನೆಯನ್ನು ಸರ್ಕಾರವು ಪರಿಗಣಿಸಬೇಕು. ಮುಂದಿನ ದಿನಗಳಲ್ಲಿ ಸಾಕ್ಷ್ಯ ಚಿತ್ರಗಳು ಡಿಜಿಟಲೀಕರಣಗೊಂಡು ಯುವಜನರನ್ನು ಸೆಳೆಯುವ ಪ್ರಯತ್ನಗಳಾಬೇಕು ಎಂದರು.

ಕೇಂದ್ರ ಸಾಹಿತ್ಯ ಅಕಾಡೆಮಿಯ ಪ್ರಾದೇಶಿಕ ಕಾರ್ಯದರ್ಶಿ ಎಸ್. ವಿ. ಮಹಾಲಿಂಗೇಶ್ವರ್, ಭಾರತೀಯ ವಿದ್ಯಾಭವನದ ನಿರ್ದೇಶಕ ಎಚ್. ಎನ್ ಸುರೇಶ್, ಸಂಚಾಲಕ ಎನ್.ಎಸ್. ಶ್ರೀಧರ ಮೂರ್ತಿ ಉಪಸ್ಥಿತರಿದ್ದರು.